All India Radio: Bangalore
Regional Bulletin In Kannada
13.04.2025 / 2.30 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಜಾತಿ ಗಣತಿ ವರದಿ ವಿಚಾರದಲ್ಲಿ ಆತುರದ ನಿರ್ಧಾರವಿಲ್ಲ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ಹುಬ್ಬಳ್ಳಿಯಲ್ಲಿ ಬಿಜೆಪಿ ಭೀಮ ಯಾತ್ರೆ ಸ್ವಾಗತಿಸಿದ ಸಚಿವ ಪ್ರಲ್ಹಾದ್ ಜೋಶಿ
- ಬೆಂಗಳೂರಿನ ಐತಿಹಾಸಿಕ ಕರಗ ಸಂಪನ್ನ - ಕಣ್ತುಂಬಿಕೊಂಡ ಭಕ್ತ ಸಮೂಹ
- ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ಇಂದು ಭಾರೀ ಮಳೆ ಸಂಭವ - ಹವಾಮಾನ ಇಲಾಖೆ ಮುನ್ಸೂಚನೆ
- ಐಪಿಎಲ್ ಟಿ-೨೦ ಟೂರ್ನಿ; ಜೈಪುರದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ರಾಜಸ್ಥಾನ ರಾಯಲ್ಸ್ ಮುಖಾಮುಖಿ

*****************

ಜಾತಿ ಗಣತಿ ವರದಿ ವಿಚಾರದಲ್ಲಿ ಆತುರದ ನಿರ್ಧಾರ ತೆಗೆದುಕೊಳ್ಳುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಘಾಟಿ ಸುಬ್ರಹ್ಮಣ್ಯ ಸ್ವಾಮಿ ದೇವಾಲಯಕ್ಕೆ ಭೇಟಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವರದಿಯ ಸತ್ಯಾಂಶಗಳನ್ನು ತಿಳಿದುಕೊಂಡು ಎಲ್ಲರಿಗೂ ನ್ಯಾಯ ಒದಗಿಸುವ ಕಾರ್ಯ ಮಾಡಲಾಗುವುದು ಎಂದು ಹೇಳಿದ್ದಾರೆ.

ಜಾತಿ ಗಣತಿ ವರದಿ ಬಗ್ಗೆ ಇನ್ನೂ ಸಚಿವ ಸಂಪುಟದಲ್ಲಿ ಚರ್ಚೆ ಆಗಬೇಕು . ಮುಖ್ಯಮಂತ್ರಿಗಳು ಸದನದಲ್ಲಿ ಚರ್ಚೆ ಮಾಡುವುದಾಗಿ ಹೇಳಿದ್ದಾರೆ ಎಂದು ತಿಳಿಸಿದ್ದಾರೆ.

ಧ್ವನಿ: ಡಿ.ಕೆ.ಶಿವಕುಮಾರ್

ಘಾಟಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ರಚನೆಯಿಂದಾಗಿ ಕ್ಷೇತ್ರವು ಇನ್ನು ಹೆಚ್ಚು ಅಭಿವೃದ್ಧಿಯಾಗಲಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

*****************

ಸಂವಿಧಾನ ಶಿಲ್ಪಿ ಡಾಕ್ಟರ್ ಬಿ.ಆರ್ ಅಂಬೇಡ್ಕರ್ ಅವರ ಜಯಂತಿ ಹಿನ್ನೆಲೆ ರಾಜ್ಯಾದ್ಯಂತ ಇಂದು ಮತ್ತು ನಾಳೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

೧೯೨೫ ರ ಏಪ್ರಿಲ್ ೧೦ ಹಾಗೂ ೧೧ ರಂದು ಬೆಳಗಾವಿಯ ನಿಪ್ಪಾಣಿಗೆ ತಲುಪಿದ್ದ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆಗಮನಕ್ಕೆ ೧೦೦ ವರ್ಷ ತುಂಬಿದ ಹಿನ್ನೆಲೆಯಲ್ಲಿ, ಹುಬ್ಬಳ್ಳಿಯಲ್ಲಿ ಇಂದು ಬಿಜೆಪಿ ಭೀಮ ಹೆಜ್ಜೆ ಎಂಬ ವಿಶೇಷ ಕಾರ್ಯಕ್ರಮ ಆಯೋಜಿಸಿದೆ. ಹುಬ್ಬಳ್ಳಿಗೆ ಆಗಮಿಸಿದ ಯಾತ್ರೆಯನ್ನು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸ್ವಾಗತಿಸಿದರು.

ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಪ್ರಲ್ಹಾದ್ ಜೋಶಿ, ಭೀಮ ಹೆಜ್ಜೆಗೆ ಶತಮಾನದ ಸಂಭ್ರಮವಾಗಿದ್ದು, ರಾಜ್ಯದ ವಿವಿಧೆಡೆಗಳಲ್ಲಿ ಐದು ದಿನಗಳ ಕಾಲ ಜನ ಜಾಗೃತಿ ಕಾರ್ಯಕ್ರಮಗಳು ನಡೆಯಲಿದೆ ಎಂದು ತಿಳಿಸಿದ್ದಾರೆ.

ಬಿಜೆಪಿ ನಡೆಸುತ್ತಿರುವ ಭೀಮ ಹೆಜ್ಜೆ ಯಾತ್ರೆ ವಿರುದ್ಧ ವ್ಯಂಗ್ಯವಾಡಿರುವ ಸಚಿವ ಎಚ್.ಸಿ.ಮಹದೇವಪ್ಪ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಅಂಬೇಡ್ಕರ್ ಸೋಲಿಗೆ ಕಾಂಗ್ರೆಸ್ ಕಾರಣ ಎಂದು ದೂರಿದ್ದಾರೆ.

*****************

ಜಾತಿ ಗಣತಿ ವರದಿ ವಿಚಾರವಾಗಿ ಇದೇ ೧೭ ರಂದು ವಿಶೇಷ ಸಚಿವ ಸಂಪುಟ ಸಭೆ ನಡೆಯಲಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ವಿಜಯಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಭೆಯಲ್ಲಿ ಜಾತಿ ಗಣತಿ ವರದಿ ಮಾತ್ರ ಚರ್ಚೆಯಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಜಾತಿ ಗಣತಿ ವರದಿ ಪ್ರತಿ ಬಂದಿದ್ದು, ಹೆಚ್ಚಿನ ಅಧ್ಯಯನ ನಡೆಸುವುದಾಗಿ ಹೇಳಿದ್ದಾರೆ.

ಇದೇ ವೇಳೆ, ಜಾತಿ ಗಣತಿಯಲ್ಲಿ ಲಿಂಗಾಯತರ ಸಂಖ್ಯೆ ಕಡಿಮೆಯಾಗಲು ಲಿಂಗಾಯತರೇ ಕಾರಣ ಎಂದು ತಿಳಿಸಿದ್ದಾರೆ. ಮೀಸಲಾತಿಗಾಗಿ ಹಿಂದೂ ರೆಡ್ಡಿ, ಹಿಂದೂ ಬಣಜಿಗ, ಹಿಂದೂ ಸಾದರ ಎಂದು ನಮೂದಿಸಿರುವ ಹಿನ್ನೆಲೆಯಲ್ಲಿ ಲಿಂಗಾಯತರ ಸಂಖ್ಯೆ ಕಡಿಮೆಯಾಗಿದೆ ಎಂದು ಪ್ರತಿಕ್ರಿಯಿಸಿದ್ದಾರೆ.

ಎಲ್ಲರನ್ನು ಒಗ್ಗೂಡಿಸಿದರೆ, ಲಿಂಗಾಯತರ ಸಂಖ್ಯೆ ೧ ಕೋಟಿಗೂ ಅಧಿಕವಾಗಲಿದೆ ಎಂದು ತಿಳಿಸಿದ್ದಾರೆ.

******************

ಜಾತಿ ಗಣತಿ ವರದಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮುಳುವಾಗಬಹುದು ಎಂದು ಕೇಂದ್ರ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ವಪಕ್ಷೀಯರೇ ಸಿದ್ದರಾಮಯ್ಯ ವಿರುದ್ಧ ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ ಎಂದು ಹೇಳಿದ್ದಾರೆ. ಪ್ರಸ್ತುತ ತಂದಿರುವ ಜಾತಿಗಣತಿ ವರದಿಯನ್ನು ಸಿದ್ದರಾಮಯ್ಯ ಅವರು ತಿರಸ್ಕರಿಸಬೇಕು. ಮತ್ತೊಂದು ಸಮೀಕ್ಷೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ.

ಇದೇ ವೇಳೆ ಬೆಲೆ ಏರಿಕೆ ಕುರಿತು ಪ್ರತಿಕ್ರಿಯಿಸಿದ ಅವರು, ಬೆಂಗಳೂರಿನಲ್ಲಿ ಕಸಕ್ಕೂ ಶುಲ್ಕ ವಿಧಿಸುತ್ತಿದ್ದು, ಜನರ ಬದುಕೆ ದುಸ್ತರ ಎಂದು ತಿಳಿಸಿದ್ದಾರೆ.

*****************

ಬೆಂಗಳೂರಿನ ಐತಿಹಾಸಿಕ ಕರಗ ಸಂಪನ್ನಗೊಂಡಿದೆ. ಮಧ್ಯರಾತ್ರಿ ೧.೦೦ ಗಂಟೆಯ ಸುಮಾರಿಗೆ ಕರಗ ಹೊತ್ತ ಅರ್ಚಕ ವಿ. ಜ್ಞಾನೇಂದ್ರ ಧರ್ಮರಾಯಸ್ವಾಮಿ ದೇವಸ್ಥಾನದಿಂದ ಹೊರ ಬಂದರು.

ಮಲ್ಲಿಗೆಯ ಹೂವುಗಳಿಂದ ಅಲಂಕೃತವಾಗಿದ್ದ ಕರಗವನ್ನು ಸುತ್ತುವರಿದ ವೀರ ಕುಮಾರರು ಅಲಗು ಸೇವೆ ಸಲ್ಲಿಸಿದರು. ಇದಕ್ಕೂ ಮುನ್ನ, ಧರ್ಮರಾಯಸ್ವಾಮಿ ರಥೋತ್ಸವಕ್ಕೂ ಚಾಲನೆ ನೀಡಲಾಯಿತು. ಬಳಿಕ ಕರಗವು ತಿಗಳರ ಪೇಟೆ ಸೇರಿದಂತೆ ಹಳೆ ಬೆಂಗಳೂರಿನ ಹಲವು ಭಾಗಗಳಲ್ಲಿ ಸಂಚರಿಸಿ, ವಿವಿಧ ದೇವಾಲಯಗಳಲ್ಲಿ ಪೂಜೆ ಸ್ವೀಕರಿಸಿತು.

ಕೃಷ್ಣರಾಜ ಮಾರುಕಟ್ಟೆ ಸಮೀಪವಿರುವ ಮಸ್ತಾನ್ ಸಾಬ್ ದರ್ಗಾಗೂ ಕರಗವು ಭೇಟಿ ನೀಡಿದ್ದು, ಮುಸ್ಲಿಮರು ಕರಗಕ್ಕೆ ಗಂಧಪೂಸಿ ಮಲ್ಲಿಗೆ ಹೂ ಎರಚಿ, ಗೌರವ ಸಮರ್ಪಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಧ್ಯರಾತ್ರಿಯಲ್ಲೇ ಧರ್ಮರಾಯಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿ, ಕರಗ ಮಹೋತ್ಸವದಲ್ಲಿ ಭಾಗಿಯಾಗಿದ್ದರು. ಇದೇ ವೇಳೆ ಬೆಂಗಳೂರಿನ ವಿವಿಧ ದೇವಾಲಯಗಳ ದೇವರ ಉತ್ಸವ ಮೂರ್ತಿಗಳ ಮೆರವಣಿಗೆಯೂ ಸಹ ನಡೆಯಿತು. ಬೆಂಗಳೂರು ಕರಗವನ್ನು ಕಣ್ತುಂಬಿಕೊಳ್ಳಲು ಹೊರ ಜಿಲ್ಲೆ ಮತ್ತು ಹೊರ ರಾಜ್ಯಗಳಿಂದ ಭಕ್ತರು ಆಗಮಿಸಿದ್ದರು.

*****************

ಹಿಂದೂ ಮಹಾಸಾಗರ ಹಡಗು- ಐಒಎಸ್ ಸಾಗರ್ ಎಂದು ನಿಯೋಜಿಸಲ್ಪಟ್ಟಿರುವ ಐಎನ್ಎಸ್ ಸುನೈನಾ ನಿನ್ನೆ ಟಾಂಜೇನಿಯಾದ ದಾರ್-ಎಸ್- ಸಲಾಮ್ ಬಂದರಿಗೆ ತಲುಪಿದೆ.

ಈ ತಿಂಗಳ ೫ ರಂದು ಕಾರವಾರದಿಂದ ಹೊರಟ ಈ ನೌಕೆ ಹಿಂದೂ ಮಹಾಸಾಗರ ಪ್ರದೇಶದ ೯ ಮಿತ್ರ ರಾಷ್ಟ್ರಗಳ ೪೪ ನೌಕಾ ಸಿಬ್ಬಂದಿಯನ್ನು ಹೊತ್ತು ಬಂದರು ತಲುಪಿದೆ.

ಬಂದರು ಭೇಟಿಯ ಸಮಯದಲ್ಲಿ ನೌಕಾ ಸಿಬ್ಬಂದಿ, ಆಫ್ರಿಕಾ-ಭಾರತ ನಿರ್ಣಾಯಕ ಕಡಲ ಕಾರ್ಯಾಚರಣೆ ಐಕೇಮ್ ನೌಕಾ ಸಮರಾಭ್ಯಾಸದಲ್ಲಿ ತೊಡಗಲಿದ್ದಾರೆ. ಇಂದಿನಿಂದ ಆರಂಭವಾಗಲಿರುವ  ಈ ಸಮರಾಭ್ಯಾಸಕ್ಕೆ ಕೇಂದ್ರ ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್ ಚಾಲನೆ ನೀಡಲಿದ್ದಾರೆ.

ಆರು ದಿನಗಳ ಈ ಸಮರಾಭ್ಯಾಸ ಇದೇ ೧೮ ರಂದು ಸಂಪನ್ನಗೊಳ್ಳಲಿದ್ದು, ಅದು ಮಿತ್ರ ರಾಷ್ಟ್ರಗಳೊಂದಿಗೆ ಕಡಲ ಭದ್ರತೆ ಮತ್ತು ಸಹಕಾರ ಹೆಚ್ಚಿಸುವ ಗುರಿ ಹೊಂದಿದೆ.

*****************

ಕೋಲಾರ ಜಿಲ್ಲಾ ಪೊಲೀಸ್ ವತಿಯಿಂದ ಜಿಲ್ಲೆಯ ನಾಗರೀಕರಿಗೆ ಬಂದೂಕು ತರಬೇತಿ ಶಿಬಿರ ಹಮ್ಮಿಕೊಂಳ್ಳಲಾಗಿದೆ. ತರಬೇತಿಯು ಇದೇ ೨೧ ರಿಂದ ೨೬ ರವರೆಗೆ ೬ ದಿನಗಳ ಕಾಲ ಕೋಲಾರ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ನಡೆಯಲಿದೆ.

ಅರ್ಜಿಗಳನ್ನು ಇದೇ ೧೫ ರಿಂದ ೧೬ ರವರೆಗೆ ಕೋಲಾರದ ಡಿ.ಎ.ಆರ್ ಘಟಕದಲ್ಲಿ ನೀಡಲಾಗುವುದು. ಆಸಕ್ತ ನಾಗರೀಕರು ಈ ತರಬೇತಿಯನ್ನು ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

*****************

ಬೆಂಗಳೂರು, ಶಿವಮೊಗ್ಗ, ಕರಾವಳಿ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನ ಹಲವೆಡೆ

ನಿನ್ನೆ ಮಳೆಯಾಗಿದೆ. ಬೆಂಗಳೂರಿನಲ್ಲಿ ಇಂದು ಕೂಡ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ನಿರ್ದೇಶಕ ಸಿ ಎಸ್ ಪಾಟೀಲ್ ತಿಳಿಸಿದ್ದಾರೆ.

ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಕೊಪ್ಪಳ, ರಾಯಚೂರು, ವಿಜಯಪುರ, ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಹಾಸನ, ಕೊಡಗು, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ಶಿವಮೊಗ್ಗ, ತುಮಕೂರು, ವಿಜಯಪುರದಲ್ಲಿ ಇಂದು ಗುಡುಗು ಸಹಿತ ಮಳೆಯಾಗಲಿದೆ ಎಂದು ಹೇಳಿದ್ದಾರೆ.

ಧ್ವನಿ: ಸಿ.ಎಸ್.ಪಾಟೀಲ್

*****************

ರಾಜಸ್ಥಾನದ ಜೈಪುರ ಸವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ರಾಜಸ್ಥಾನ ರಾಯಲ್ಸ್ ಮುಖಾಮುಖಿಯಾಗಲಿವೆ.

ಪಂದ್ಯ ಮಧ್ಯಾಹ್ನ ೩.೩೦ಕ್ಕೆ ಆರಂಭವಾಗಲಿದೆ. ಈ ಪಂದ್ಯದಲ್ಲಿ ಗೊ ಗ್ರೀನ್ ಅಭಿಯಾನದ ಭಾಗವಾಗಿ ಆರ್‌ಸಿಬಿ ಹಸಿರು ಜೆರ್ಸಿಯೊಂದಿಗೆ ಕಣಕ್ಕಿಳಿಯಲಿದೆ.

*****************

ಸಂಕ್ಷಿಪ್ತ ಸುದ್ದಿಗಳು

೧. ವಿವಿಧ ವೃತ್ತಿಪರ ಕೋರ್ಸ್‌ಗಳ ಪ್ರವೇಶಾತಿಗೆ ಇದೇ ೧೮ ರಿಂದ ೧೭ ರಂದು ಸಾಮಾನ್ಯ ಪ್ರವೇಶ ಪರೀಕ್ಷೆಗಳು ನಡೆಯಲಿದ್ದು, ಜಿಲ್ಲೆಯ ೩೩ ಪರೀಕ್ಷಾ ಕೇಂದ್ರಗಳಲ್ಲಿ ವ್ಯವಸ್ಥಿತವಾಗಿ ಪರೀಕ್ಷೆ ನಡೆಸುವಂತೆ ಅಧಿಕಾರಿಗಳಿಗೆ ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚಿಸಿದ್ದಾರೆ.

೨. ಕನ್ನಡದ ಸವಾಲುಗಳ ಬಗ್ಗೆ ಗಂಭೀರ ಚಿಂತನೆ ನಡೆಸುವ ಮೂಲಕ ಭವಿಷ್ಯದ ಬಗ್ಗೆ ಚಿಂತಿಸಬೇಕು ಎಂದು ಕನ್ನಡಪರ ಚಿಂತಕ ಕೆ.ರಾಜ್‌ಕುಮಾರ್ ಹೇಳಿದ್ದಾರೆ.

*********ಮುಕ್ತಾಯ*********